**Bangalore**
**Regional News**
**28.02.2026 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಶಿಕ್ಷಕರ ಬೇಡಿಕೆ ಈಡೇರಿಸಲು ಪ್ರಾಮಾಣಿಕ ಪ್ರಯತ್ನ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

೨. ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ ಮಿತಿ ಹೆಚ್ಚಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ ರಾಜ್ಯ ಸರ್ಕಾರ

೩. ಇರಾನ್-ಇಸ್ರೇಲ್ ಸಂಘರ್ಷ ಹಿನ್ನೆಲೆ ; ಇರಾನ್‌ನಲ್ಲಿ ಭಾರತೀಯ ನಾಗರಿಕರು ಎಚ್ಚರಿಕೆಯಿಂದ ಇರುವಂತೆ ವಿದೇಶಾಂಗ ಸಚಿವಾಲಯ ಸೂಚನೆ

೪. ಬಜೆಟ್ ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಜಂಟಿ ಹೋರಾಟ - ಪ್ರತಿಪಕ್ಷ ನಾಯಕ ಆರ್. ಅಶೋಕ

**<><*<><>*><>**

ಸಾಮಾನ್ಯರನ್ನು ಅಸಮಾನ್ಯರನ್ನಾಗಿ ಮಾಡುವ ಶಕ್ತಿ ಇರುವುದು ಶಿಕ್ಷಕರಿಗೆ ಮಾತ್ರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರಿನಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನ ಹಾಗೂ ಸುವರ್ಣ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಿಗೆ ವೈಜ್ಞಾನಿಕ, ವೈಚಾರಿಕ ಶಿಕ್ಷಣ ದೊರೆಯಬೇಕು ಎಂದು ತಿಳಿಸಿದ್ದಾರೆ.

ಶಿಕ್ಷಕರ ಹಲವಾರು ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲಾಗುವುದು ಹಾಗೂ ೭ ಮತ್ತು ೮ನೇ ವೇತನ ಆಯೋಗವನ್ನು ಜಾರಿ ಮಾಡಿದ್ದು, ಬೇಡಿಕೆಗಳನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

**<><*<><>*><>**

ರಾಜ್ಯದಲ್ಲಿ ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ ಆರಂಭಿಸಲಾಗಿದ್ದು, ನೋಂದಣಿಯನ್ನು ೬ ಲಕ್ಷ ಮೆಟ್ರಿಕ್ ಟನ್‌ಗಳಿಗೆ ಸೀಮಿತಗೊಳಿಸಲಾಗಿದೆ. ಇನ್ನೂ ಹೆಚ್ಚಿನ ರೈತರು ರಾಗಿ ಖರೀದಿಗೆ ನೋಂದಾಯಿಸಲು ಮನವಿ ಮಾಡುತ್ತಿರುವ ಹಿನ್ನಲೆಯಲ್ಲಿ ರಾಗಿ ಖರೀದಿ ಮಿತಿಯನ್ನು ಹೆಚ್ಚಿಸುವಂತೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ದೊಡ್ಡಬಳ್ಳಾಪುರ ತಾಲೂಕಿನ ಮೆಳೇಕೋಟೆ ಗ್ರಾಮದಲ್ಲಿ ಕೃಷಿ ಇಲಾಖೆಯಿಂದ ನಡೆದ ಸಿರಿಧಾನ್ಯ ಮತ್ತು ಕಿಸಾನ್ ಮೇಳ-೨೦೨೬ ಉದ್ಘಾಟಿಸಿ ಮಾತನಾಡಿದ ಅವರು, ಸಿರಿಧಾನ್ಯಗಳಿಂದ ದೇಹಕ್ಕೆ ಉತ್ತಮ ಆರೋಗ್ಯ ದೊರೆಯಲಿದೆ ಎಂದು ಹೇಳಿದ್ದಾರೆ. ರಾಸಾಯನಿಕ ಮುಕ್ತ ಆಹಾರಗಳಿಂದ ದೇಹಕ್ಕೆ ಹೆಚ್ಚಿನ ಪೌಷ್ಟಿಕಾಂಶ ದೊರೆಯಲಿದೆ. ರೈತರಿಗೆ ಸಿರಿಧಾನ್ಯಗಳನ್ನು ಬೆಳೆಯಲು ಹೆಚ್ಚಿನ ಉತ್ತೇಜನ ನೀಡಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

<><*<><>*><>

ರಾಜಕೀಯ ಲಾಭಕ್ಕಾಗಿ ಸಿಬಿಐ, ಆದಾಯ ತೆರಿಗೆ ಇಲಾಖೆ ಮತ್ತು ಜಾರಿ ನಿರ್ದೇಶನಾಲಯದಂತಹ ಸಂಸ್ಥೆಗಳನ್ನು ಕೇಂದ್ರ ಸರ್ಕಾರ ದುರುಪಯೋಗ ಪಡಿಸಿಕೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅರವಿಂದ್ ಕೇಜ್ರಿವಾಲ್, ಮನೀಶ್ ಸಿಸೋಡಿಯಾ ಪ್ರಕರಣದಲ್ಲಿ ಚಾರ್ಜ್‌ಶೀಟ್ ಎಲ್ಲಿದೆ ಎಂದು ಪ್ರಶ್ನಿಸಿದ್ದಾರೆ. ೯೮ ಪ್ರತಿಶತ ಪ್ರಕರಣದಲ್ಲಿ ಯಾವುದೇ ಶಿಕ್ಷೆಯಾಗಿಲ್ಲ ಎಂದು ಹೇಳಿದ್ದಾರೆ.

<><*<><>*><>

ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ಇಂದು ಇರಾನ್ ಮೇಲೆ ದಾಳಿ ನಡೆಸಿದ್ದು, ಪಶ್ಚಿಮ ಇರಾನ್‌ನಲ್ಲಿ ಹಲವಾರು ಮಿಲಿಟರಿ ನೆಲೆಗಳನ್ನು ಗುರಿಯಾಗಿರಿಸಲಾಗಿದೆ ಎಂದು ಇಸ್ರೇಲ್ ಸೇನೆ ಸ್ಪಷ್ಟಪಡಿಸಿದೆ. ಕತಾರ್‌ನಲ್ಲಿರುವ ಅಲ್-ಉದ್ಯೈದ್ ವಾಯುನೆಲೆ, ಕುವೈತ್‌ನಲ್ಲಿರುವ ಅಲ್-ಸೇಲಂ ವಾಯುನೆಲೆ, ಯುಎಇಯ ಅಲ್-ಧಾಫ್ರಾ ವಾಯುನೆಲೆ, ಬಹ್ರೇನ್‌ನಲ್ಲಿರುವ ಅಮೆರಿಕದ ಐದನೇ ವಾಯು ನೆಲೆಯನ್ನು ಗುರಿಯಾಗಿಸಿಕೊಂಡು ಇರಾನ್ ದಾಳಿ ನಡೆಸಿದೆ ಎಂದು ಸುದ್ದಿ ಸಂಸ್ಥೆಯೊಂದು ವರದಿ ಮಾಡಿದೆ. ಇರಾನ್‌ನಲ್ಲಿರುವ ಎಲ್ಲಾ ಭಾರತೀಯ ನಾಗರಿಕರು ಎಚ್ಚರಿಕೆಯಿಂದ ಇರುವಂತೆ ವಿದೇಶಾಂಗ ಸಚಿವಾಲಯ ಸೂಚನೆ ನೀಡಿದೆ. ಹೆಚ್ಚಿನ ಮಾರ್ಗದರ್ಶನಕ್ಕಾಗಿ ರಾಯಭಾರ ಕಚೇರಿಯ ದೂರವಾಣಿ ಸಂಖ್ಯೆ +೯೮೯೧೨೮೧೦೯೧೧೫, ೯೮೯೧೨೮೧೦೯೧೦೯ಕ್ಕೆ ಕರೆ ಮಾಡಬಹುದಾಗಿದೆ. ಈ ನಡುವೆ ಮಧ್ಯಪ್ರಾಚ್ಯ ರಾಷ್ಟ್ರಗಳಿಗೆ ಪ್ರಯಾಣಿಸುವ ಎಲ್ಲಾ ವಿಮಾನಗಳನ್ನು

ಏರ್‌ಇಂಡಿಯಾ ಸ್ಥಗಿತಗೊಳಿಸಿದೆ. ದುಬೈ ವಿಮಾನ ನಿಲ್ದಾಣಗಳ ಮುಂದಿನ ಸೂಚನೆ ಬರುವವರೆಗೆ ಎಲ್ಲಾ ವಿಮಾನ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಿದೆ.

<><*<><>*><>

ಸ್ಥಳೀಯ ಸಂಸ್ಕೃತಿ ಆಧಾರಿತ ಮತ್ತು ಸಮುದಾಯ ಕೇಂದ್ರಿತ ಕಾರ್ಯಕ್ರಮಗಳ ಮೂಲಕ ಕರಾವಳಿ ಜನತೆಯ ಮನಗೆದ್ದಿರುವ ಮಂಗಳೂರಿನ ರೇಡಿಯೋ ಸಾರಂಗ್ ೧೦೭.೮ ಎಫ್‌ಎಂ ಬಾನುಲಿ ಕೇಂದ್ರವು ತನ್ನ ಕಾರ್ಯಕ್ರಮಗಳ ಮೂಲಕ ರಾಷ್ಟ್ರದ ಗಮನಸೆಳೆದಿದೆ. ಸಂತ ಅಲೋಶಿಯಸ್ ಪರಿಗಣಿತ ವಿಶ್ವವಿದ್ಯಾಲಯದ ಆವರಣದಲ್ಲಿ ಕಾರ್ಯಾಚರಿಸುತ್ತಿರುವ ಈ ಕೇಂದ್ರವು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದಿಂದ ನೀಡಲಾಗುವ ಪ್ರಶಸ್ತಿಯನ್ನು ಮೂರು ಬಾರಿ ಪಡೆದಿರುವುದು ಹೆಗ್ಗಳಿಕೆಯಾಗಿದೆ. ಇದು ಕರಾವಳಿಯ ಬಹುಭಾಷಾ ಸಂಸ್ಕೃತಿಯನ್ನು ಪ್ರತಿನಿಧಿಸುತ್ತಿದ್ದು, ಕನ್ನಡ, ತುಳು, ಕೊಂಕಣಿ ಮತ್ತು ಬ್ಯಾರಿ ಭಾಷೆಗಳಲ್ಲಿ ಕಾರ್ಯಕ್ರಮ ನೀಡುತ್ತಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ರೆವರೆಂಡ್ ಫಾದರ್ ಡಾ.ಪ್ರವೀಣ್ ಮಾರ್ಟಿಸ್ ತಿಳಿಸಿದ್ದಾರೆ.

<><*<><>*><>

ಬಜೆಟ್ ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಜಂಟಿಯಾಗಿ ಹೋರಾಡಲಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಘೋಷಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರವು ಒಂದು ಸಾವಿರ ದಿನಗಳನ್ನು ಪೂರೈಸಿದ್ದು, ಅಭಿವೃದ್ಧಿ ಲೆಕ್ಕದಲ್ಲಿ ಸಂಪೂರ್ಣ ಹಿಂದುಳಿದಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರ ಅಭಿವೃದ್ಧಿ ಮರೆತು ನಿರುದ್ಯೋಗಿಗಳ ಪ್ರತಿಭಟನೆ, ಹಗರಣಗಳ ಸರಮಾಲೆಯಿಂದ ಆಳ್ವಿಕೆ ನಡೆಸುತ್ತಿದೆ ಎಂದು ದೂರಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳಿಲ್ಲದೆ, ರೋಗಿಗಳು ಖಾಸಗಿ ಔಷಧ ಕೇಂದ್ರಗಳನ್ನು ಅವಲಂಬಿಸುತ್ತಿದ್ದಾರೆ. ಔಷಧಿ ಖರೀದಿಗೆ ಆರೋಗ್ಯ ಇಲಾಖೆಯಲ್ಲಿ ಹಣವಿಲ್ಲ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><*<><>*><>

ರಾಷ್ಟ್ರೀಯ ವಿಜ್ಞಾನ ದಿನವಾದ ಇಂದು ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯಲ್ಲಿ ರಾಮನ್ ಪರಿಣಾಮದ ಆವಿಷ್ಕಾರದ ೯೮ನೇ ವರ್ಷಾಚರಣೆಯನ್ನು ಆಚರಿಸಲಾಯಿತು. ರಾಮನ್ ಸಂಶೋಧನಾ ಸಂಸ್ಥೆಯಿಂದ ವೈಜ್ಞಾನಿಕ ಪ್ರದರ್ಶನ ಮಳಿಗೆಗಳು ಸಂವಾದಾತ್ಮಕ ಪ್ರಾಯೋಗಿಕ ಪ್ರಯೋಗಗಳು, ವಿಜ್ಞಾನ ರಸಪ್ರಶ್ನೆಗಳನ್ನು ಆಯೋಜಿಸಲಾಗಿತ್ತು. ವಿವಿಧ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಸುಮಾರು ಒಂದು ಸಾವಿರದ ೩೦೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

<><*<><>*><>

ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಅಂಗವಾಗಿ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಂಜನಿಯರಿಂಗ್ ಪ್ರಥಮ ವರ್ಷದ ವಿದ್ಯಾರ್ಥಿಗಳ ಪ್ರಾಜೆಕ್ಟ್ ಪ್ರದರ್ಶನ "ವಿನ್ಯಾಸ" ಇಂದು ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿತ್ತು. ವಿಶ್ವವಿದ್ಯಾಲಯ ಕುಲಪತಿ ಪ್ರೊಫೆಸರ್ ಎಸ್.ವಿದ್ಯಾಶಂಕರ, ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೇರಿದಂತೆ ವಿಶ್ವವಿದ್ಯಾಲಯ ಪ್ರಾಧ್ಯಾಪಕರು, ಶಾಲಾ - ಕಾಲೇಜಿನ ವಿದ್ಯಾರ್ಥಿಗಳು ವಿನ್ಯಾಸ ಪ್ರದರ್ಶನ ವೀಕ್ಷಿಸಿದರು.

<><*<><>*><>

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ -ನಿಮ್ಹಾನ್ಸ್ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಅಂಗವಾಗಿ ಮಾರ್ಚ್ ೩ ಮತ್ತು ೪ರಂದು ವಿಶೇಷ ವಿಜ್ಞಾನ ವಸ್ತು ಪ್ರದರ್ಶನವನ್ನು ಆಯೋಜಿಸಿದೆ.  ಸಂವಾದ, ಮಾದರಿಗಳ ಪ್ರಾತ್ಯಕ್ಷಿಕೆ, ರಸಪ್ರಶ್ನೆ ಸ್ಪರ್ಧೆ, ಮನಸ್ಸಿನ ಆಟ ಸೇರಿ ವಿವಿಧ ಚಟುವಟಿಕೆಗಳನ್ನು ಈ ಪ್ರದರ್ಶನ ಒಳಗೊಳ್ಳಲಿದೆ. ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಕ್ಷೇತ್ರಗಳಿಗೆ ಸಂಬಂಧಪಟ್ಟ ಆವಿಷ್ಕಾರಗಳು ಮತ್ತು ಇತ್ತೀಚಿನ ಬೆಳವಣಿಗೆಗಳನ್ನು ತಿಳಿಯಲು ಇದೊಂದು ಸದವಕಾಶವಾಗಿದ್ದು, ಸಾರ್ವಜನಿಕರಿಗೆ ಪ್ರವೇಶ ಮುಕ್ತವಾಗಿದೆ.

<><*<><>*><>

ಭಾರತದ ಸಂಸದೀಯ ರಾಜತಾಂತ್ರಿಕತೆಯನ್ನು ಜಾಗತಿಕ ಮಟ್ಟದಲ್ಲಿ ವಿಸ್ತರಿಸುವ ನಿಟ್ಟಿನಲ್ಲಿ ವಿಶ್ವದ ೭೦ ಕ್ಕೂ ಅಧಿಕ ರಾಷ್ಟ್ರಗಳೊಂದಿಗೆ ಶಾಸಕಾಂಗ ಸಂಬಂಧವನ್ನು ಬಲಪಡಿಸಲು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ರಚಿಸಿರುವ  ಸಂಸದೀಯ ಸ್ನೇಹ ಗುಂಪಿಗೆ ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ನಾಮ ನಿರ್ದೇಶನಗೊಂಡಿದ್ದಾರೆ. ಯುಕ್ರೇನ್ ದೇಶದ ಗುಂಪಿಗೆ ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲಾಗಿದೆ. ವಿವಿಧ ದೇಶಗಳ ಸಂಸತ್ತುಗಳ ನಡುವೆ ಸಂವಾದ, ಸಹಕಾರ ಮತ್ತು ಪರಸ್ಪರ ವಿಶ್ವಾಸವನ್ನು ವೃದ್ಧಿಸುವುದು ಈ ಸ್ನೇಹ ಗುಂಪುಗಳ ಮುಖ್ಯ ಉದ್ದೇಶವಾಗಿದೆ.

<><*<><>*><>

ಹುಬ್ಬಳ್ಳಿಯ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ನಡೆದ ರಣಜಿ ಟ್ರೋಫಿ ಫೈನಲ್ ಹಣಾಹಣಿಯಲ್ಲಿ ಪಂದ್ಯದ ೫ನೇ ದಿನ ಜಮ್ಮು-ಕಾಶ್ಮೀರ ತಂಡ ಉತ್ತಮ ಬ್ಯಾಟಿಂಗ್ ಮೂಲಕ ಪಂದ್ಯವನ್ನು ಡ್ರಾ ಮಾಡಿಕೊಂಡಿದೆ. ರಣಜಿ ನಿಯಮಗಳ ಪ್ರಕಾರ ಮೊದಲ ಇನ್ನಿಂಗ್ಸ್‌ನಲ್ಲಿ ಮುನ್ನಡೆ ಪಡೆದ ಜಮ್ಮು-ಕಾಶ್ಮೀರ ತಂಡವನ್ನು ವಿಜೇತ ತಂಡವೆಂದು ಘೋಷಿಸಲಾಗಿದೆ. ಈ ಮೂಲಕ ಹುಬ್ಬಳ್ಳಿಯ ಮೈದಾನದಲ್ಲಿ ಜಮ್ಮು-ಕಾಶ್ಮೀರ ಇತಿಹಾಸ ಸೃಷ್ಟಿಸಿದೆ. ಮೊದಲ ಬಾರಿಗೆ ಫೈನಲ್‌ಗೇರಿದ ಜಮ್ಮು-ಕಾಶ್ಮೀರ ಬಲಿಷ್ಠ ಕರ್ನಾಟಕವನ್ನು ಮಣಿಸಿ ಚಾಂಪಿಯನ್ ಪಟ್ಟಕ್ಕೇರಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>